ಅ) ಮಂಡಳಿಯ ಜಾಗೃತ ದಳ ಮತ್ತು ತಾಂತ್ರಿಕ ಪರಿಶೋದನೆ ಘಟಕವು ಅಂತಹ ಪ್ರಕರಣಗಳು ಗಮನಕ್ಕೆ ಬಂದಾಗ ಕಾನೂನು ರೀತ್ಯ ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಮಂಡಳಿಯ ಅಧಿಕಾರಿಗಳು ವಿದ್ಯುತ್ ಕಳ್ಳತನ ಪತ್ತೆ ಹಚ್ಚುವ ಕಾರ್ಯದಲ್ಲಿ ನಿರತರಾಗಿರುತ್ತಾರೆಯೇ ಹೊರತು ಅವರುಗಳೊಡನೇ ಶಾಮಿಲಾಗಿರುವುದಿಲ್ಲ.

ಕಳ್ಳಂಬೆಳ್ಳ ಮತ್ತು ಶಿರಾ ಪಟ್ಟಣಗಳಿಗೆ ಹೇಮಾವತಿ ನದಿಯಿಂದ ನೀರು ಸರಬರಾಜು.

1806 - ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ) : ಮಾನ್ಯ ಬೃಹತ್ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳ್ಳಂಬೆಳ್ಳ ಮತ್ತು ಶಿರಾ ಪಟ್ಟಣಗಳಿಗೆ ಹೇಮಾವತಿ ನದಿಯಿಂದ ನೀರು ಸರಬರಾಜು ಮಾಡಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಆ) ನಾಲಾ ಕೆಲಸ ಪೂರ್ಣವಾಗದಿದ್ದರೆ ಕೂಡಲೇ ಎಸ್ಕೇಪ್ ನಾಲೆ ನಿರ್ಮಿಸಿ ನೀರು ಸರಬರಾಜು ಮಾಡಲಾಗುವುದೇ?

ಶ್ರೀ. ಕೆ.ಎನ್. ನಾಗೇಗೌಡ (ಬೃಹತ್ ನೀರಾವರಿ ಸಚಿವರು) :

ಅ) ಕಳ್ಳಂಬೆಳ್ಳ ಮತ್ತು ಶಿರಾ ಪಟ್ಟಣಗಳಿಗೆ ಹೇಮಾವತಿ ನದಿಯಿಂದ ನೀರು ಸರಬರಾಜು ಮಾಡಲು ಹೇಮಾವತಿ ಯೋಜನೆಯಲ್ಲಿ ಯಾವುದೇ ಅವಕಾಶ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಕಳ್ಳಂಬೆಳ್ಳ ಕ್ಷೇತ್ರದ ಹುಳಿಯೂರಿನ ಅಮಾನಿಕೆರೆ ಕುರಿತು.

1807- ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ) : ಮಾನ್ಯ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳ್ಳಂಬೆಳ್ಳ ಕ್ಷೇತ್ರದ ಹುಳಿಯೂರಿನ ಅಮಾನಿ ಕೆರೆಗೆ ಸಂಬಂಧಿಸಿದಂತೆ ಬಸ್‌ಸ್ಟ್ಯಾಂಡಿಗೆ ಹೊಂದಿಕೊಂಡಿರುವ 800:100 ಜಮೀನನ್ನು ಸಣ್ಣ ಪುಟ್ಟ ಪೆಟ್ಟಿಗೆ ಅಂಗಡಿಯವರಿಗೆ ಪುನರ್‌ವಸತಿ ಕಲ್ಪಿಸಲು ಕೋರಿದ್ದು ಅದು ಇನ್ನೂ ಬಿಡುಗಡೆಯಾಗದೇ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರವು ಶೀಘ್ರ ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ತಿಪ್ಪೇಸ್ವಾಮಿ (ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಸಚಿವರು) :

ಅ) ಬಂದಿದೆ.

ಆ) ಪರಿಶೀಲನೆಯಲ್ಲಿದೆ.